**ಓ ಎಸ್ ನಂಃ 76/2018**
**ಡಿ.ಡಬ್ಲ್ಯೂ -1**
**ದಿನಾಂಕಃ 26.09.2023**

**ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿಯರ ಪರವಾಗಿ ಶ್ರೀ ಟಿ.ಎನ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿರುವ ಅಂಶವನ್ನು ನಾನೇ ಹೇಳಿ ಬರೆಸಿ ಸಹಿ ಹಾಕಿರುತ್ತೇನೆ. ಅದರಲ್ಲಿನ ಅಂಶಗಳು ಸತ್ಯವಾಗಿರುತ್ತವೆ. ನ್ಯಾಯಾಲಯದ ಮುಂದೆ ಸಲ್ಲಿಸಿರುವ ದಾಖಲೆಗಳನ್ನು ನೋಡಿದರೆ ನಾನು ಗುರುತಿಸುತ್ತೇನೆ.

ದಾವಾ ಸ್ವತ್ತಿಗೆ ಸಂಬಂಧಿಸಿದ, ಉಪನೋಂದಣಾಧಿಕಾರಿ, ಹೊಸದುರ್ಗ ಇವರಿಂದ ನೊಂದಾಯಿಸಲ್ಪಟ್ಟ ಚೆನ್ನಪ್ಪ ಶೆಟ್ಟಿ, ಸಿದ್ದಪ್ಪ ಶೆಟ್ಟಿ, ನಂಜಪ್ಪ ಶೆಟ್ಟಿ, ದಾನ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು **ನಿ.ಡಿ-1** ಎಂದು ಗುರುತಿಸಲಾಯಿತು. ದಿಃ31.08.2009 ರ ದಾನ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು **ನಿ.ಡಿ-2** ಎಂದು ಗುರುತಿಸಲಾಯಿತು. ಎಸ್.ಎನ್.ಸುರೇಶ್ ಬಾಬು ರವರಿಗೆ ಸಂಬಂದಪಟ್ಟ ವಂಶವೃಕ್ಷವನ್ನು ಹಾಜರುಪಡಿಸುತ್ತಿದ್ದು **ನಿಡಿ-3** ಎಂದು ಗುರುತಿಸಲಾಯಿತು. ವಸಂತಮ್ಮ ರವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು **ನಿಡಿ-4** ಎಂದು ಗುರುತಿಸಲಾಯಿತು. ಆಸ್ತಿ ತೆರಿಗೆ ರಿಜಿಸ್ಟರ್ ನ್ನು ಹಾಜರುಪಡಿಸುತ್ತಿದ್ದು **ನಿಡಿ-5** ಎಂದು ಗುರುತಿಸಲಾಯಿತು. 4 ಕಂದಾಯ ರಶೀದಿಯನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ **ನಿಡಿ-6 ರಿಂದ 9** ಎಂದು ಗುರುತಿಸಲಾಯಿತು. 3 ನೀರಿನ ಕಂದಾಯ ರಶೀದಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ **ನಿಡಿ-10 ರಿಂದ 12** ಎಂದು ಗುರುತಿಸಲಾಯಿತು.

ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ, ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ

ಅಪರ ಸಿವಿಲ್ ಮತ್ತು ಜೆ ಎಂ ಎಫ್ ಸಿ
ನಾಯ್ಯಾಧೀಶರು, ಹೊಸದುರ್ಗ.